**ಸಾಕ್ಷಿಯನ್ನು ದಿಃ 25.06.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 3 ನೇ ಎದುರುದಾರರ ಪರ ವಕೀಲರಿಂದಃ**

ಅಪಘಾತ 2022 ರಲ್ಲಿ ಆಗಿದೆ, ದಿನಾಂಕ ನೆನಪಿಲ್ಲ. ಅಪಘಾತ ಕೆಂಪನಪಾಳ್ಯ, ಕೊಳ್ಳೇಗಾಲ ತಾಲ್ಲೂಕಿನಲ್ಲಿ ಆಗಿದೆ. ನಾನು ಒಬ್ಬನೇ ಯಮಹಾ ಬೈಕಿನಲ್ಲಿ ಹೋಗುತ್ತಿದ್ದೆ. ಆ ಬೈಕ್ ನನಗೆ ಸೇರಿದ್ದು. ಅದರ ವಿಮೆ ಮತ್ತು ಆರ್.ಸಿ., ಹಾಜರುಪಡಿಸಿದ್ದಾರೋ ಇಲ್ಲವೋ ಗೊತ್ತಿಲ್ಲ. ನನ್ನ ವಾಹನಕ್ಕೆ ಪಾಲಿಸಿ ಇರಲಿಲ್ಲ ಎಂದರೆ ನನಗೆ ಗೊತ್ತಿಲ್ಲ. ಎದುರುನಿಂದ ಬೈಕ್ ಸವಾರ ಅತಿವೇಗವಾಗಿ ಬಂದು ಡಿಕ್ಕಿಪಡಿಸಿದ್ದಾನೆ. ಅಪಘಾತವಾದ ಕೂಡಲೇ ಕೊಳ್ಳೇಗಾಲ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಪಡೆದು ನಂತರ ಕೆ.ಆರ್.ಆಸ್ಪತ್ರೆಗೆ ದಾಖಲಾಗಿದ್ದೇನೆ. ಕೊಳ್ಳೇಗಾಲ ಆಸ್ಪತ್ರೆಯಲ್ಲಿ ಒಂದು ದಿನ ಇದ್ದೆ. ಸದರಿ ಆಸ್ಪತ್ರೆಯ ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ನನಗೆ ಗೊತ್ತಿಲ್ಲ. ಯಾವ ತಾರೀಖಿನಿಂದ ಕೆ.ಆರ್.ಆಸ್ಪತ್ರೆಗೆ ಸೇರಿದ್ದೇನೆ ಎಂದು ನೆನಪಿಲ್ಲ. ಅಲ್ಲಿ 20 ದಿನ ಚಿಕಿತ್ಸೆಪಡೆದಿದ್ದೇನೆ. ನನಗೆ ಚಿಕಿತ್ಸೆ ನೀಡಿದ ವೈದ್ಯರ ಹೆಸರು ನೆನಪಿಲ್ಲ. ಸದರಿ ಆಸ್ಪತ್ರೆಯ ಬಿಡುಗಡೆ ಪ್ರಮಾಣ ಪತ್ರ ಹಾಜರುಪಡಿಸಿಲ್ಲ. ನನಗೆ ಅಪಘಾತದಿಂದ ಪೆಟ್ಟಾಗಿದ್ದಲ್ಲ, ಬೇರೆ ಕಾರಣಕ್ಕೆ ಪೆಟ್ಟಾಗಿ ಆಸ್ಪತ್ರೆಗೆ ಸೇರಿದ್ದೇನೆ ಎಂದರೆ ಸರಿಯಲ್ಲ.

ಪೊಲೀಸರಿಗೆ ನನ್ನ ಅಣ್ಣ ದೂರನ್ನು ನೀಡಿದ್ದಾರೆ. ಪೊಲೀಸರು ಆಸ್ಪತ್ರೆಗೆ ಬಂದಿದ್ದಾರೆ. ನಾನು 5 ನೇ ತರಗತಿ ಓದಿದ್ದೇನೆ. ನಿ.ಪಿ-2 ರಲ್ಲಿಯ ಸಹಿ ನನ್ನದೇ. ಪೊಲೀಸರು ಯಾರ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದಾರೆ ಎಂದು ಗೊತ್ತಿಲ್ಲ. ನನಗೆ 32 ವರ್ಷ ವಯಸ್ಸು. ನನಗೆ 36 ವರ್ಷ ಎಂದರೆ ಸರಿಯಲ್ಲ. ಅಪಘಾತಕ್ಕೆ ಮೊದಲು ನಾನು ಕೆಲಸ ಮಾಡುತ್ತಿದ್ದೆ, ಈಗ ಏನೂ ಕೆಲಸ ಮಾಡುತ್ತಿಲ್ಲ. ನನ್ನ ಕೆಲಸ ಮತ್ತು ಆದಾಯದ ಬಗ್ಗೆ ದಾಖಲೆ ಹಾಜರುಪಡಿಸಿಲ್ಲ. ನಾನು 1 ನೇ

ಎದುರುದಾರರು, ಪೊಲೀಸರು ಹಾಗೂ ವೈದ್ಯರು ಶಾಮೀಲಾಗಿ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ವಾಹನ ಚಾಲನಾ ಪರವಾನಗಿ ಇಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಅಪಘಾತವಾದ ದಿನ ನಾನು ಹೆಲ್ಮೆಟ್ ಧರಿಸಿರಲಿಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ನನ್ನ ಪ್ರಮಾಣ ಪತ್ರದಲ್ಲಿ ಹೇಳಿರುವುದೆಲ್ಲ ಸುಳ್ಳು ಎಂದರೆ ಸರಿಯಲ್ಲ. ಪರಿಹಾರಕ್ಕೋಸ್ಕರ ದಾಖಲೆಗಳನ್ನು ಸೃಷ್ಟಿಸಿಕೊಂಡು ಹಾಜರುಪಡಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.